ಖಾಸಗಿ ಅನುದಾನಿತ ವಿದ್ಯಾಸಂಸ್ಥೆಗಳ ಅಕ್ಷರ ದಾಸೋಹ

354 (668) ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗಿ ಅನುದಾನಿತ ವಿದ್ಯಾ ಸಂಸ್ಥೆಗಳಿಗೆ ಅಕ್ಷರ ದಾಸೋಹ ಯೋಜನೆಯನ್ನು ವಿಸ್ತರಿಸಿದ್ದು, ಅಸಮರ್ಪಕ ವಿತರಣೆಯಾದಲ್ಲಿ ಆ ಸಂಸ್ಥೆಯ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಅಧಿಕಾರ ವ್ಯಾಪ್ತಿಯನ್ನು ಯಾವ ಅಧಿಕಾರಿಗೆ ವಹಿಸಲಾಗಿದೆ;

ಆ) ಹಾಗಿದ್ದಲ್ಲಿ, ಅಧಿಕಾರ ವ್ಯಾಪ್ತಿಯನ್ನು ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ವಹಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಖಾಸಗಿ ಅನುದಾನಿತ ವಿದ್ಯಾ ಸಂಸ್ಥೆಗಳಿಗೆ ಅಕ್ಷರ ದಾಸೋಹ ಕಾರ್ಯಕ್ರಮದಡಿಯಲ್ಲಿ 1 ರಿಂದ 10 ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಅಕ್ಕಿ ಹಾಗೂ ಅಡುಗೆ ತಯಾರಿಕಾ ವೆಚ್ಚವನ್ನು ಮುಖ್ಯ ಶಿಕ್ಷಕರ ಖಾತೆಗೆ ಜಮಾ ಮಾಡಲಾಗುತ್ತಿದೆ. ಇದರ ಅಸಮರ್ಪಕ ವಿತರಣೆಯಾದಲ್ಲಿ ಅಥವಾ ದುರುಪಯೋಗವಾಗಿರುವುದು ಸಾಬೀತಾದಲ್ಲಿ ಅದರ ಮೊತ್ತವನ್ನು ಸಂಬಂಧ ಪಟ್ಟವರಿಂದ ಕಟಾಯಿಸಿ ಸರ್ಕಾರಕ್ಕೆ ಜಮಾ ಮಾಡಲಾಗುತ್ತದೆ. ಈ ರೀತಿ ದುರುಪಯೋಗವಾದ ಹಣವನ್ನು ಕಟಾಯಿಸಿ ಸರ್ಕಾರಕ್ಕೆ ಜಮಾ ಮಾಡುವ ವರೆಗೆ ಇದರ ಸಂಪೂರ್ಣ ಜವಾಬ್ದಾರಿಯನ್ನು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು; ಹಾಗೂ ತಾಲ್ಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕರುಗಳು, ಇವರು ವಹಿಸುತ್ತಾರೆ.

ಶಿಕ್ಷಣ ಕಾಯ್ದೆ ಅಧಿನಿಯಮಕ್ಕೆ ಅನುದಾನಿತ ಶಾಲೆಗಳು ಒಳಪಡುವುದರಿಂದ ಅಧಿನಿಯಮದ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು, ಖಾಸಗಿ ಅನುದಾನಿತ ವಿದ್ಯಾಸಂಸ್ಥೆಗಳಿಗೆ ಶಿಸ್ತು ಪ್ರಾಧಿಕಾರವು ಆಡಳಿತ ಮಂಡಳಿಯೇ ಆಗಿರುತ್ತದೆ. ಆದ್ದರಿಂದ ಅಕ್ಷರ ದಾಸೋಹ ಅಸಮರ್ಪಕ ವಿತರಣೆಯಾದಲ್ಲಿ ಆ ಸಂಸ್ಥೆಯ ಆಡಳಿತ ಮಂಡಳಿಯವರೇ ಅಸಮರ್ಪಕ ವಿತರಣೆಗೆ ಹಾಗೂ ದುರುಪಯೋಗಕ್ಕೆ ಕಾರಣರಾದವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಆ) ಈಗಾಗಲೇ ಕ್ಷೇತ್ರ ಶಿಕ್ಷಣಾಧಿಕಾರಿಗಳು ಖಾಸಗಿ ಅನುದಾನಿತ ವಿದ್ಯಾ ಸಂಸ್ಥೆಗಳ ಎಲ್ಲಾ ಬಿಲ್ಲುಗಳಿಗೂ ಮೇಲು ಸಹಿ ಮಾಡುವ ಪ್ರಾಧಿಕಾರ ವಾಗಿದ್ದು, ದುರುಪಯೋಗವಾದ ಮೊತ್ತದ ಕಟಾವಣೆಯನ್ನು ನೋಡಿಕೊಳು ತ್ತಿರುವುದರಿಂದ ಪುನಃ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಅಧಿಕಾರ ವಹಿಸುವ ಅಗತ್ಯತೆ ಕಂಡುಬರುವುದಿಲ್ಲ.

ಚಿಕ್ಕನಾಯಕನಹಳ್ಳಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

357 (671) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಮತ್ತು ಬುಕ್ಕಾಪಟ್ಟಣ ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆ ಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಇನ್ನೆಷ್ಟು ದಿನಗಳಲ್ಲಿ ಆದೇಶ ಹೊರಡಿಸಲಾಗುವುದು?

ಶ್ರೀ ಬಾಲಚಂದ್ರ ಲಕ್ಷಣರಾವ್ ಜಾರಕಿಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರು ಕರ್ನಾಟಕ ಪುರಸಭೆ ಕಾಯ್ದೆ, 1964ರ ಕಲಂ 3 ಮತ್ತು 349 ರನ್ವಯ ಹಾಗೂ 2001ರ ಜನಗಣತಿಯನ್ವಯ 10,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಒಟ್ಟು 247 ಗ್ರಾಮ ಪಂಚಾಯಿತಿಗಳ ಪಟ್ಟಿ ಮಾಡಿ ಮೇಲ್ದರ್ಜೆಗೇರಿಸುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯ ಅಭಿಪ್ರಾಯ ಕೋರಿದ್ದು, ಸದರಿ ಪ್ರಸ್ತಾವನೆಯಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಗ್ರಾಮ ಪಂಚಾಯತಿ ಮಾತ್ರ ಸೇರಿದೆ ಹಾಗೂ ಬಕ್ಕಾಪಟ್ಟಣ ಹಾಗೂ ಪಂಚಾಯತಿಯು ಸದರಿ ಪ್ರಸ್ತಾವನೆಯಲ್ಲಿ ಸೇರಿರುವುದಿಲ್ಲ.

ಆ) ಮತ್ತು ಇ) ಕಂದಾಯ ಇಲಾಖೆಯ ಆದೇಶ ಸಂಖ್ಯೆ ಆರ್‌ಡಿ 70 ಭೂದಪು 2009 ದಿನಾಂಕ: 24.12.2009 ರಲ್ಲಿ ಕರ್ನಾಟಕ ರಾಜ್ಯದಲ್ಲಿ 2011ರ ಜನಗಣತಿಯ ಕಾರ್ಯವು ಪ್ರಗತಿಯಲ್ಲಿರುವುದರಿಂದ ದಿನಾಂಕ: 31.03.2011ರವರೆಗೆ ಯಾವುದೇ ಪ್ರದೇಶವನ್ನು ಮೇಲ್ದರ್ಜೆಗೇರಿಸದಂತೆ